# ಕರ್ನಾಟಕ ವಿಧಾನ ಪರಿಷತ್ತು

## ನೂರ ಐವತ್ತನಾಲ್ಕನೆಯ ಅಧಿವೇಶನ

## ಕಾರ್ಯಕಲಾಪಗಳ ಪಟ್ಟಿ

**ಶುಕ್ರವಾರ, ದಿನಾಂಕ:13ನೇ ಡಿಸೆಂಬರ್, 2024**

**(ಸಮಯ: ಬೆಳಗ್ಗೆ: 10.00 ಗಂಟೆಗೆ)**

* * *

### 01. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಐದನೆಯ ಪಟ್ಟಿ

ಆ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಐದನೆಯ ಪಟ್ಟಿ

### 02. ಶೂನ್ಯವೇಳೆ ಪ್ರಸ್ತಾವಗಳು

### 03. ಸಭೆಯ ಮುಂದಿಡಲಾಗುವ ಕಾಗದ ಪತ್ರಗಳು

ಶ್ರೀ ಸಿದ್ದರಾಮಯ್ಯ (**ಮಾನ್ಯ ಮುಖ್ಯಮಂತ್ರಿಗಳು ಹಾಗೂ ಹಣಕಾಸು ಸಚಿವರು**) ಅವರು:-

ಭಾರತ ಸಂವಿಧಾನದ 151(2)ನೇ ಅನುಚ್ಛೇದದ ಮೇರೆಗೆ ಭಾರತದ ಲೆಕ್ಕನಿಯಂತ್ರಕರು ಮತ್ತು ಮಹಾಲೆಕ್ಕಪರಿಶೋಧಕರ ಈ ಕೆಳಕಂಡ ವರದಿಗಳನ್ನು ಮಂಡಿಸುವುದು;

**ಅ.** 2023-24ನೇ ಸಾಲಿನ ಧನವಿನಿಯೋಗ ಲೆಕ್ಕಗಳು ಮತ್ತು ಹಣಕಾಸಿನ ಲೆಕ್ಕಗಳು (ಸಂಪುಟ-I ಮತ್ತು II)

**ಆ.** ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆಯ ಕಾರ್ಯನಿರ್ವಹಣೆಯ ಕಾರ್ಯಕ್ಷಮತೆಯ ಲೆಕ್ಕಪರಿಶೋಧನಾ ವರದಿ(2024ರ ವರದಿ ಸಂಖ್ಯೆ-4)

**ಇ.** ಮಾರ್ಚ್ 2022ಕ್ಕೆ ಕೊನೆಗೊಂಡ ವರ್ಷದ ಸಾರ್ವಜನಿಕ ವಿತರಣಾ ವ್ಯವಸ್ಥೆಯ ಸರಬರಾಜು ನಿರ್ವಹಣೆ ಮೇಲಿನ ಕಾರ್ಯನಿರ್ವಹಣಾ ಲೆಕ್ಕಪರಿಶೋಧನಾ ವರದಿ(2024ರ ವರದಿ ಸಂಖ್ಯೆ-5)

**ಈ.** ಕರ್ನಾಟಕದಲ್ಲಿ ಪ್ರಾಥಮಿಕ ಶಿಕ್ಷಣ ಸಂಸ್ಥೆಗಳ ಕಾರ್ಯವೈಖರಿಯ ವರದಿ (2024ರ ವರದಿ ಸಂಖ್ಯೆ-6)

**ಉ.** ಮಾರ್ಚ್ 2022ಕ್ಕೆ ಕೊನೆಗೊಂಡ ವರ್ಷಕ್ಕೆ (ಅನುಸರಣಾ ಲೆಕ್ಕಪರಿಶೋಧನೆ-ಸಿವಿಲ್) (2024ರ ವರದಿ ಸಂಖ್ಯೆ-7)

**ಊ.** ಸಾರ್ವಜನಿಕ ಆರೋಗ್ಯ ಮೂಲಸೌಕರ್ಯ ಮತ್ತು ಆರೋಗ್ಯ ಸೇವೆಗಳ ನಿರ್ವಹಣೆ ವರದಿ (2024ರ ವರದಿ ಸಂಖ್ಯೆ-8)

..2..

ಋ. "ಕರ್ನಾಟಕದಲ್ಲಿನ ರಾಜ್ಯ ಸಂರಕ್ಷಿತ ಐತಿಹಾಸಿಕ ಪುರಾತತ್ವ ಸ್ಮಾರಕಗಳು ಮತ್ತು ಪ್ರಾಚೀನ ಅವಶೇಷಗಳ ಸಂರಕ್ಷಣೆ"ಯ ಮೇಲಿನ ವರದಿ (2024ರ ವರದಿ ಸಂಖ್ಯೆ:9)

ಎ. 73ನೇ ಸಾಂವಿಧಾನಿಕ ತಿದ್ದುಪಡಿ ಕಾಯ್ದೆಯ ಅನುಷ್ಠಾನದ ಕಾರ್ಯನಿರ್ವಹಣಾ ವರದಿ (2024ರ ವರದಿ ಸಂಖ್ಯೆ-10)

## 04. ಸದನ ಸಮಿತಿ ಕಾಲಾವಕಾಶವನ್ನು ವಿಸ್ತರಿಸುವ ಪ್ರಸ್ತಾವ

**ಶ್ರೀ ನಿರಾಣಿ ಹಣಮಂತ್ ರುದ್ರಪ್ಪ (ಅಧ್ಯಕ್ಷರು, ವಿಶೇಷ ಸದನ ಸಮಿತಿ) ಅವರು:-**

"ರಾಜ್ಯದ ವಿವಿಧ ನಿಗಮಗಳಲ್ಲಿ ಗಂಗಾ ಕಲ್ಯಾಣ ಯೋಜನೆಯಡಿ ಕೈಗೊಂಡಿರುವ ಕಾಮಗಾರಿಗಳಲ್ಲಿ ನಡೆದಿರುವ ಅವ್ಯವಹಾರಗಳ ಸಂಬಂಧ ಪರಿಶೀಲಿಸಿ ವರದಿಯನ್ನು ಸಲ್ಲಿಸಲು ರಚಿಸಲಾಗಿರುವ ವಿಶೇಷ ಸದನ ಸಮಿತಿಯು ತನ್ನ ವರದಿಯನ್ನು ಸಲ್ಲಿಸಲು ದಿನಾಂಕ:22.10.2024ರಿಂದ 06 ತಿಂಗಳುಗಳ ಕಾಲಾವಕಾಶವನ್ನು ಸದನದ ಸಹಮತಿಯನ್ನು ಕಾಯ್ದಿರಿಸಿ ವಿಸ್ತರಿಸಲಾಗಿರುವ ಪ್ರಸ್ತಾವನೆಗೆ ಸದನದ ಸಹಮತಿ ಕೋರಿ ಪ್ರಸ್ತಾವವನ್ನು ಮಂಡಿಸುವುದು".

## 05. ಉತ್ತರ ಕರ್ನಾಟಕ ಭಾಗದ ಜ್ವಲಂತ ಸಮಸ್ಯೆಗಳ ಬಗ್ಗೆ ವಿಶೇಷ ಚರ್ಚೆ

೦1. **ಕೃಷ್ಣಾ ಮೇಲ್ದಂಡೆ ಯೋಜನೆ, ಮಹದಾಯಿ, ಕಳಸಾ ಬಂಡೂರಿ ಯೋಜನೆಗಳ ಅನುಷ್ಠಾನದ ಬಗ್ಗೆ**
೦2. **ಅರಣ್ಯ ಭೂಮಿ ಅತಿಕ್ರಮಣ, ಸಂತ್ರಸ್ಥರ ಸಮಸ್ಯೆ ಹಾಗೂ ಪರಿಹಾರೋಪಾಯಗಳು**
೦3. **ರೈತರು ಎದುರಿಸುತ್ತಿರುವ ಸಮಸ್ಯೆಗಳು ಮತ್ತು ಪರಿಹಾರಗಳು**
೦4. **ಉದ್ಯೋಗ ಸೃಷ್ಟಿಗೆ ಕೈಗೊಳ್ಳಬೇಕಾಗಿರುವ ಕ್ರಿಯಾ ಯೋಜನೆಗಳು**

## 06. ಗಮನ ಸೆಳೆಯುವ ಸೂಚನೆಗಳು

೦1. **ಶ್ರೀ ಶಾಂತರಾಮ್ ಬುಡ್ನ ಸಿದ್ದಿ** ಅವರು ಕರ್ನಾಟಕ ಅರಣ್ಯ ಕಾಯ್ದೆ 1962 ಕಲಂ 28ರ ಅಡಿ ದಿನಾಂಕ:27.04.1978ರ ಪೂರ್ವದಲ್ಲಿ ಅರಣ್ಯ ಅತಿಕ್ರಮಣ ಪ್ರದೇಶವನ್ನು ಸಕ್ರಮಗೊಳಿಸಲಾಗಿದ್ದಾಗ್ಯೂ disforest donatory ಜಾರಿಯಾಗದಿರುವುದರಿಂದ ರೈತರು ಸರ್ಕಾರದ ಸೌಲಭ್ಯಗಳಿಂದ ವಂಚಿತರಾಗಿರುವ ಕುರಿತು ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

೦2. **ಶ್ರೀ ನಿರಾಣಿ ಹಣಮಂತ್ ರುದ್ರಪ್ಪ** ಅವರು ಬಾಗಲಕೋಟೆ ಮತ್ತು ವಿಜಯಪುರ ಅವಳಿ ಜಿಲ್ಲೆಗಳಲ್ಲಿನ ಪ್ರವಾಸಿ ತಾಣಗಳಾದ ಬಾದಾಮಿ, ಬನಶಂಕರಿ, ಐಹೊಳೆ, ಪಟ್ಟದಕಲ್ಲು, ಗೋಲಗುಂಬಜ್, ಶಿವನ ಮಂದಿರ, ಆಲಮಟ್ಟಿ ಜಲಾಶಯದ ಹಿನ್ನೀರಿನಲ್ಲಿ ಬಗೆ ಬಗೆಯ ಪಕ್ಷಿಯ ತಾಣಗಳನ್ನು ನಿರ್ಮಿಸಿ ಅಭಿವೃದ್ಧಿಪಡಿಸುವ ಕುರಿತು ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರ ಗಮನ ಸೆಳೆಯುವುದು.

೦3. **ಮಾನ್ಯ ವಿರೋಧ ಪಕ್ಷದ ನಾಯಕರಾದ ಶ್ರೀ ಛಲವಾದಿ ಟಿ. ನಾರಾಯಣಸ್ವಾಮಿ ಹಾಗೂ ಮಾನ್ಯ ಶಾಸಕರುಗಳಾದ ಶ್ರೀ ನಿರಾಣಿ ಹಣಮಂತ್ ರುದ್ರಪ್ಪ, ಶ್ರೀ ಎಸ್.ಎಲ್. ಭೋಜೇಗೌಡ, ಶ್ರೀ ಎನ್. ರವಿಕುಮಾರ್, ಶ್ರೀ ಶಶೀಲ್ ಜಿ. ನಮೋಶಿ, ಶ್ರೀ ಎಸ್.ವ್ಹಿ. ಸಂಕನೂರ, ಡಾ: ಧನಂಜಯ ಸರ್ಜಿ ಹಾಗೂ ಇತರರುಗಳು** ವೀರಶೈವ ಲಿಂಗಾಯತ ಪಂಚಮಸಾಲಿ ಸಮಾಜಕ್ಕೆ ಪ್ರವರ್ಗ-2ಎ ಮೀಸಲಾತಿ ನೀಡುವ ವಿಷಯದ ಕುರಿತು ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರ ಗಮನ ಸೆಳೆಯುವುದು.

..3..

೦4. **ಶ್ರೀ ಐವನ್ ಡಿ'ಸೋಜಾ** ಅವರು ದಕ್ಷಿಣ ಕನ್ನಡ, ಉಡುಪಿ, ಉತ್ತರ ಕನ್ನಡ, ಶಿವಮೊಗ್ಗ, ಚಿಕ್ಕಮಗಳೂರು ಮತ್ತು ಕೊಡಗು ಜಿಲ್ಲೆಗಳ ವ್ಯಾಪ್ತಿಗೊಳಪಡುವ ಉಚ್ಚ ನ್ಯಾಯಾಲಯ ಪೀಠವನ್ನು ಮಂಗಳೂರಿನಲ್ಲಿ ಸ್ಥಾಪಿಸುವ ಕುರಿತು ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

## 07. ನಿಯಮ 330ರ ಮೇರೆಗೆ

೦1. **ಡಾ: ತಳವಾರ್ ಸಾಬಣ್ಣ** ಅವರು ಅತ್ಯಂತ ಹಿಂದುಳಿದ ಜಾತಿಗಳನ್ನು ಒಳಗೊಂಡ ಪ್ರವರ್ಗ-1 ಗುಂಪಿಗೆ ಜನಸಂಖ್ಯೆ, ಆರ್ಥಿಕ, ಸಾಮಾಜಿಕ, ಶೈಕ್ಷಣಿಕ ಹಿನ್ನಲೆ ಪರಿಗಣಿಸದೆ ಅವೈಜ್ಞಾನಿಕವಾಗಿ ಮೀಸಲಾತಿ ಪ್ರಮಾಣವನ್ನು ನಿಗದಿಪಡಿಸಿರುವ ಕುರಿತು ಪ್ರಸ್ತಾಪಿಸುವುದು.

೦2. **ಶ್ರೀ ಬಿ.ಕೆ. ಹರಿಪ್ರಸಾದ್** ಅವರು ಉಡುಪಿ ಜಿಲ್ಲೆ ಮಲ್ಪೆಯ ಮಹಾಲಕ್ಷ್ಮಿ ಕೋ-ಆಪರೇಟಿವ್ ಬ್ಯಾಂಕಿನಲ್ಲಿ ನಕಲಿ ದಾಖಲೆಗಳನ್ನು ಸೃಷ್ಟಿಸಿ ಅವ್ಯವಹಾರ ಎಸಗಿರುವ ಕುರಿತು ಪ್ರಸ್ತಾಪಿಸುವುದು.

೦3. **ಶ್ರೀಯುತರುಗಳಾದ ಎಸ್.ಎಲ್. ಭೋಜೇಗೌಡ, ಶರವಣ ಟಿ.ಎ, ಕೆ.ಎ. ತಿಪ್ಪೇಸ್ವಾಮಿ, ಸಿ.ಎನ್. ಮಂಜೇಗೌಡ ಹಾಗೂ ಟಿ.ಎನ್. ಜವರಾಯಿಗೌಡ** ಅವರುಗಳು ಜಿಲ್ಲಾ ಪಂಚಾಯತಿ ಹಾಗೂ ತಾಲ್ಲೂಕು ಪಂಚಾಯತ್ ಅಧ್ಯಕ್ಷ ಮತ್ತು ಉಪಾಧ್ಯಕ್ಷ ಸ್ಥಾನಗಳ ಮೀಸಲಾತಿಯನ್ನು ಪ್ರಕಟಿಸಿ ಕ್ಷೇತ್ರ ಪುನರ್ ವಿಂಗಡಣೆ ಮಾಡಿ ಆದ್ಯತೆ ಮೇಲೆ ಜಿಲ್ಲಾ ಪಂಚಾಯಿತಿ ಹಾಗೂ ತಾಲ್ಲೂಕು ಪಂಚಾಯಿತಿಯ ಚುನಾವಣೆಯನ್ನು ನಡೆಸುವ ಕುರಿತು ಪ್ರಸ್ತಾಪಿಸುವುದು.

೦4. **ಶ್ರೀಯುತರುಗಳಾದ ಮಂಜುನಾಥ್ ಭಂಡಾರಿ, ಶರಣಗೌಡ ಬಯ್ಯಾಪುರ, ಸುನೀಲ್‌ಗೌಡ ಪಾಟೀಲ್ ರಾಜೇಂದ್ರ ರಾಜಣ್ಣ ಹಾಗೂ ಚನ್ನರಾಜ್ ಬಸವರಾಜ್ ಹಟ್ಟಿಹೊಳಿ** ಅವರುಗಳು ಗಾಂಧೀಜಿಯವರ ಗ್ರಾಮ ಸ್ವರಾಜ್ಯದ ಕನಸನ್ನು ನನಸಾಗಿಸಲು ಗ್ರಾಮ ಪಂಚಾಯತಿಗಳು ಗ್ರಾಮ ಸರ್ಕಾರಗಳಾಗಿ, ತಾಲ್ಲೂಕು ಪಂಚಾಯತಿಗಳು ತಾಲ್ಲೂಕು ಸರ್ಕಾರಗಳಾಗಿ, ಜಿಲ್ಲಾ ಪಂಚಾಯತಿಗಳು ಜಿಲ್ಲಾ ಸರ್ಕಾರಗಳಾಗಿ ಕಾರ್ಯನಿರ್ವಹಿಸಲು ಎಲ್ಲಾ ಹಣಕಾಸು ಮತ್ತು ಅಧಿಕಾರಗಳನ್ನು ಹಸ್ತಾಂತರಗೊಳಿಸಲು ಅವಕಾಶ ಕಲ್ಪಿಸಿರುವ ಪಂಚಾಯತ್ ರಾಜ್ ಕಾನೂನನ್ನು ಸಂಪೂರ್ಣವಾಗಿ ಅನುಷ್ಠಾನಗೊಳಿಸುವ ಕುರಿತು ಪ್ರಸ್ತಾಪಿಸುವುದು.

**ಕೆ.ಆರ್. ಮಹಾಲಕ್ಷ್ಮಿ**
**ಕಾರ್ಯದರ್ಶಿ**

---

**ಪ್ರತಿ ದಿನದ ವಿಧಾನ ಪರಿಷತ್ತಿನ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.**

**www.kla.kar.nic.in/council/council.htm**